## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಕೊಪ್ಪಳ ಜಿಲ್ಲೆ, ಕೊಪ್ಪಳ ತಾಲ್ಲೂಕಿನ ಬಂಡಿಹರ್ಲಾಪುರ ಗ್ರಾಮ ಪಂಚಾಯಿತಿಯ ಮಾಜಿ ಅಧ್ಯಕ್ಷರಾದ ಹಾಗೂ ಹಾಲಿ ಸದಸ್ಯರಾದ ಶ್ರೀಮತಿ ರೇಣುಕಾ ಹನುಮಂತಪ್ಪ ಕಟಗಿ ಇವರ ವಿರುದ್ದ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993ರ ಪ್ರಕರಣ 43(ಎ) ರನ್ವಯ ಕ್ರಮ ಜರುಗಿಸುವ ಬಗ್ಗೆ.

**ಓದಲಾಗಿದೆ:**

1) ಮುಖ್ಯ ಕಾರ್ಯನಿರ್ವಾಹಣಾಧಿಕಾರಿ, ಜಿಲ್ಲಾ ಪಂಚಾಯಿತಿ, ಕೊಪ್ಪಳ ಇವರ ಪತ್ರ ಸಂಖ್ಯೆ: ಜಿಪಂಕೊ/ಗ್ರಾಪಂ/ಎಸ್‌ಬಿಎಂ/ಸಿಸಿಎ/01/2018-19/1144,ದಿನಾಂಕ: 24/06/2019.
2) ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/1135/ಗ್ರಾಪಂಅ/2018, ದಿನಾಂಕ: 02/02/2019.
3) ವಿಚಾರಣಾಧಿಕಾರಿಗಳು ಹಾಗೂ ಪ್ರಾದೇಶಿಕ ಆಯುಕ್ತರು, ಕಲಬುರಗಿ ವಿಭಾಗ, ಕಲಬುರಗಿ ಇವರ ಪತ್ರ ಸಂಖ್ಯೆ:ಕಂ/ಪ್ರಾಆಕ/ಜಿಪಂ/132/2018-19/1848, ದಿನಾಂಕ:29.07.2019
4) ಪ್ರಾದೇಶಿಕ ಆಯುಕ್ತರು, ಕಲಬುರಗಿ ವಿಭಾಗ, ಕಲಬುರಗಿ ಇವರ ವಿಚಾರಣಾ ನೋಟಿಸ್, ದಿನಾಂಕ: 12.07.2019
5) ಶ್ರೀಮತಿ ರೇಣುಕಾ ಹನುಮಂತಪ್ಪ ಕಟಗಿ, ಮಾಜಿ ಅಧ್ಯಕ್ಷರು ಹಾಗೂ ಹಾಲಿ ಸದಸ್ಯರು ಇವರ ಲಿಖಿತ ಹೇಳಿಕೆ,
6) ವಿಚಾರಣಾಧಿಕಾರಿಗಳ ವರದಿ, ದಿನಾಂಕ:29.07.2019

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ(1)ರ ಪತ್ರದಲ್ಲಿ ಕೊಪ್ಪಳ ಜಿಲ್ಲೆ, ಕೊಪ್ಪಳ ತಾಲ್ಲೂಕಿನ ಬಂಡಿರ್ಲಾಪುರ ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷರು ಹಾಗೂ ಹಾಲಿ ಸದಸ್ಯರಾದ ಶ್ರೀಮತಿ ರೇಣುಕಾ ಹನುಮಂತಪ್ಪ ಇಟಗಿ ಇವರ ಬಂಡಿಹರ್ಲಾಪುರ ಗ್ರಾಮ ಪಂಚಾಯಿತಿಯಲ್ಲಿ ಸ್ವಚ್ಚ ಭಾರತ ಮಿಷನ್ ಯೋಜನೆಯಡಿ ಶೌಚಾಲಯಗಳ ನಿರ್ಮಾಣದಲ್ಲಿ ಸರ್ಕಾರದ ಹಣ ದುರುಪಯೋಗಪಡಿಸಿಕೊಂಡಿರುವುದರಿಂದ ಇವರ ವಿರುದ್ದ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 43(ಎ) ಮತ್ತು 48(4)ರನ್ವಯ ಕ್ರಮ ಜರುಗಿಸಲು ಕುರಿತು ಮುಖ್ಯ ಕಾರ್ಯನಿರ್ವಹಣಾಧಿಕಾರಿ, ಜಿಲ್ಲಾ ಪಂಚಾಯಿತಿ, ಕೊಪ್ಪಳ ಇವರು ಪ್ರಾದೇಶಿಕ ಆಯುಕ್ತರು, ಕಲಬುರಿ ವಿಭಾಗ, ಕಲಬುರಗಿ ಇವರಿಗೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ಸರ್ಕಾರದ ಆದೇಶದಲ್ಲಿ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993ರ ಕಲಂ 43(ಎ)ರಡಿ ಗ್ರಾಮ ಪಂಚಾಯಿತಿ ಸದಸ್ಯರುಗಳು, ಪ್ರಕರಣ 48(4) ಮತ್ತು 48(5)ರಡಿ ಗ್ರಾಮ ಪಂಚಾಯಿತಿ ಅಧ್ಯಕ್ಷ ಮತ್ತು ಉಪಾಧ್ಯಕ್ಷರುಗಳ ಮೇಲೆ ದಾಖಲಾಗುವ ದೂರುಗಳಿಗೆ ಸಂಬಂಧಿಸಿದಂತೆ ಅರೆನ್ಯಾಯಿಕ ಮಾದರಿಯಲ್ಲಿ ವಿಚಾರಣೆ ನಡೆಸುವ ಅಧಿಕಾರವನ್ನು ಸಂಬಂಧಿಸಿದ ಕಂದಾಯ ವಿಭಾಗಗಳ ಪ್ರಾದೇಶಿಕ ಆಯುಕ್ತರುಗಳಿಗೆ ವಹಿಸಿ ಆದೇಶಿಸಲಾಗಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (3)ರಲ್ಲಿ ವಿಚಾರಣಾಧಿಕಾರಿಗಳು ಕೊಪ್ಪಳ ತಾಲ್ಲೂಕಿನ ಬಂಡಿಹರ್ಲಾಪುರ ಗ್ರಾಮ ಪಂಚಾಯಿತಿಯ ಮಾಜಿ ಅಧ್ಯಕ್ಷರಾದ ಹಾಗೂ ಹಾಲಿ ಸದಸ್ಯರಾದ ಶ್ರೀಮತಿ ರೇಣುಕಾ ಹನುಮಂತಪ್ಪ ಕಟಗಿ ಇವರ ವಿರುದ್ದ ಬಂಡಿಹರ್ಲಾಪುರ ಗ್ರಾಮ ಪಂಚಾಯಿತಿಯಲ್ಲಿ ಸ್ವಚ್ಚ ಭಾರತ ಮಿಷನ್ ಯೋಜನೆಯಡಿ ಶೌಚಾಲಯಗಳ ನಿರ್ಮಾಣದಲ್ಲಿ ಸರ್ಕಾರದ ಹಣ ದುರುಪಯೋಗಪಡಿಸಿಕೊಂಡಿದ್ದಾರೆ ಎನ್ನಲಾದ ಆರೋಪವನ್ನು ಕೈ ಬಿಟ್ಟು ಪ್ರಕರಣವನ್ನು ಮುಕ್ತಾಯಗೊಳಿಸಬಹುದೆಂದು ವಿಚಾರಣಾ ವರದಿಯಲ್ಲಿ ಕಂಡುಬಂದಿರುತ್ತದೆ ಎಂದು ತಿಳಿಸುತ್ತಾ, ಸದರಿಯವರ ವಿರುದ್ಧ ಕ್ರಮ ಜರುಗಿಸುವ ಸಂಬಂಧ ವಿಚಾರಣಾ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (4)ರಂತೆ ವಿಚಾರಣಾಧಿಕಾರಿಗಳ ವರದಿಯನ್ವಯ ಕ್ರಮಜರುಗಿಸುವ ಸಂಬಂಧ ದಿನಾಂಕ: 12/07/2019ರಂದು ವಿಚಾರಣಾ ನೋಟೀಸ್ ಅನ್ನು ಜಾರಿಗೊಳಿಸಲಾಗಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (5)ರಲ್ಲಿ ದಿನಾಂಕ:12.07.2019ರಂದು ಜಾರಿಗೊಳಿಸಿದ್ದ ನೋಟೀಸ್‌ಗೆ ಬಂಡಿಹರ್ಲಾಪುರ ಗ್ರಾಮ ಪಂಚಾಯಿತಿಯ ಆಧ್ಯಕ್ಷರು ಹಾಗೂ ಹಾಲಿ ಸದಸ್ಯರಾದ ಶ್ರೀಮತಿ ರೇಣುಕ ಹನುಮಂತಪ್ಪ ಕಟಗಿ ಇವರು ಈ ಕೆಳಕಂಡಂತೆ ಲಿಖಿತ ಹೇಳಿಕೆಗಳನ್ನು ಸಲ್ಲಿಸಿರುತ್ತಾರೆ:-

- ಬಂಡಿಹರ್ಲಾಪುರ ಗ್ರಾಮ ಗ್ರಾಮ ಪಂಚಾಯಿತಿಯಲ್ಲಿ ಸ್ವಚ್ಚ ಭಾರತ ಯೋಜನೆಯಡಿ ಶೌಚಾಲಯಗಳ ನಿರ್ಮಾಣದಲ್ಲಿ ಸರ್ಕಾರದ ಹಣ ರೂ.1,52,000/-ಗಳನ್ನು ದುರಪಯೋಗ ಪಡಿಸಿಕೊಂಡಿರುವುದಾಗಿ ಹೇಳಿ ತಮ್ಮ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993ರ ಪ್ರಕರಣ 43(ಎ) ಮತ್ತು 48(4)ರನ್ವಯ ಸದಸ್ಯತ್ವವನ್ನು ರದ್ದು ಪಡಿಸಲಾಗುವುದು ಎಂದು ಈಗಾಗಲೇ ದಿನಾಂಕ:14.05.2018ರಂದು ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯಿತಿ ಕೊಪ್ಪಳ ಇವರು ಆದೇಶ ಹೊರಡಿಸಿದ್ದರು ಎಂದು ತಿಳಿಸಿರುತ್ತಾರೆ.
- ಆ ನಂತರದಲ್ಲಿ ಮಾನ್ಯ ಮುಖ್ಯ ಕಾರ್ಯನಿರ್ವಾಹ ಆಧಿಕಾರಿಗಳು, ಜಿಲ್ಲಾ ಪಂಚಾಯಿತಿ, ಕೊಪ್ಪಳ ಇವರು ಸದರಿ ವಿಷಯದಲ್ಲಿ ವಿಚಾರಣೆ ನಡೆಸಿ ದಿನಾಂಕ:01/12.09.2018ರಂದು ಆದೇಶ ಹೊರಡಿಸಿ ಸದರಿ ಆಪಾದನೆಗಳಿಂದ ತಮ್ಮನ್ನು ದೋಷಮುಕ್ತಳನ್ನಾಗಿಸಿ ಅಧ್ಯಕ್ಷಳಾಗಿ ಮುಂದುವರೆಯಲು ಆದೇಶಿಸಿರುತ್ತಾರೆ. ಅಲ್ಲದೇ ಸದರಿ ಪ್ರಕರಣದಲ್ಲಿ ಮಾನ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯಿತಿ, ಕೊಪ್ಪಳ ಇವರು ಉಪ ಸ್ಥಿತರಿದ್ದು ಸದರಿ ಆದೇಶದಲ್ಲಿ ಬಗ್ಗೆ ಪೂರ್ಣ ಮಾಹಿತಿಯುಳ್ಳವರಾಗಿದ್ದಾರೆ.
- ಆದಾಗ್ಯೂ ಈಗ ಪುನ: ದಿನಾಂಕ:29.05.2019ರಂದು ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯಿತಿ, ಕೊಪ್ಪಳ ಇವರು ಮಾನ್ಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಜಿಲ್ಲಾ ಪಂಚಾಯಿತಿ ಕೊಪ್ಪಳ ಇವರಿಗೆ ಪತ್ರ ಬರೆದು, ಮುಕ್ತಾಯಗೊಂಡ ಪ್ರಕರಣದ ಬಗ್ಗೆ ಉಲ್ಲೇಖಿಸಿದೆ ಸದರಿ ವಿಷಯಕ್ಕೆ ಪುನ: ವಿಚಾರಣೆಗಾಗಿ ಸಲ್ಲಿಸಿರುತ್ತಾರೆ. ಸದರಿ ಪತ್ರದ ಆಧಾರದ ಮೇಲೆ ಈಗ ಪುನ: ದಿನಾಂಕ:27.06.2019ರಂದು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಜಿಲ್ಲಾ ಪಂಚಾಯಿತಿ ಕೊಪ್ಪಳ ಇವರು ತಮಗೆ ಪತ್ರ ಬರೆದಿದ್ದು, ಸದರಿ ಪತ್ರಗಳನ್ವಯ ಈಗ ತಮ್ಮ ಕಾರ್ಯಯಾಲಯದಿಂದ ತಮಗೆ ನೋಟಿಸ್ ಕಳುಹಿಸಿರುವುದು ಕಂಡುಬರುತ್ತದೆ. ಒಂದು ಬಾರಿ ವಿಚಾರಣೆ ಮಾಡಿ ಮುಕ್ತಾಯಗೊಂಡ ಪ್ರಕರಣವನ್ನು ಪುನ: ಮರು ವಿಚಾರಣೆಗೆ ಒಳಪಡಿಸಲು ಕಾನೂನಿನಲ್ಲಿ ಅವಕಾಶವಿರುವುದಿಲ್ಲವೆಂದು ತಿಳಿಸಿರುತ್ತಾರೆ.
- ಸದರಿ ಆಪಾದನೆಯಲ್ಲಿ ಯಾವುದೇ ಸತ್ಯಾಂಶವಿಲ್ಲವಾದ್ದರಿಂದ ತಾವು ಕಳುಹಿಸಿದ ನೋಟಿಸ್‌ಗೆ ನೊಂದು ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಯಲಯ ಧಾರವಾಡದಲ್ಲಿ ರಿಟ್ ಅರ್ಜಿ:111922/19 ಅರ್ಜಿಯನ್ನು ಸಲ್ಲಿಸಿದ್ದು, ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯ ಧಾರವಾಡ ಇವರು ತಮ್ಮ ಅರ್ಜಿಯನ್ನು ಪರಿಗಣಿಸಿ ತಮ್ಮ ಕಾರ್ಯಾಲಯದಿಂದ ತಮಗೆ ಕಳುಹಿಸಲಾದ ಕಡತ: ಸಂ:ಪ್ರಾ/ಅಕಾ/ಜಿಪಂ/132/2018-19, ದಿನಾಂಕ:11.07.2019ರ ನೋಟಿಸ್‌ಗೆ ತಡೆಯಾಜ್ಞೆ ನೀಡಿರುತ್ತಾರೆ ಎಂದು ತಿಳಿಸಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (5)ರ ವರದಿಯಲ್ಲಿ ವಿಚಾರಣಾಧಿಕಾರಿಗಳು ವಿಚಾರಣೆ ನಡೆಸಿ ಸಲ್ಲಿಸಿರುವ ವಿಚಾರಣಾಧಿಕಾರಿಗಳ ಅಂಶಗಳು ಈ ಕೆಳಕಂಡಂತೆ ಇರುತ್ತದೆ.

- ಬಂಡಿಹರ್ಲಾಪುರ ಗ್ರಾಮದಲ್ಲಿ 2015ರಿಂದ 2018ರವರಗೆ ಒಟ್ಟು118 ಶೌಚಾಲಗಳನ್ನು ನಿರ್ಮಿಸಲಾಗಿ 117 ಶೌಚಾಲಗಳಿಗೆ ಹಣ ಪಾವತಿಸಲಾಗಿರುತ್ತದೆ, ಅದರಲ್ಲಿ 07 ಶೌಚಾಲಯಗಳು ಅಪೂರ್ಣವಾಗಿರುವುದು ಹಾಗೂ ಒಂದು ಫಲಾನುಭವಿಗಳಿಗೆ ಎರಡು ಸಲ ಪೋತ್ಸಾಹ ಧನ ಪಾವತಿಸಲಾಗಿರುತ್ತದೆಂದು ತಿಳಿಸಿರುತ್ತಾರೆ.
- ಹೊಸ ಬಂಡಿಹರ್ಲಾಪುರ ಹಾಗೂ ಹಳೇ ಬಂಡಿಹರ್ಲಾಪುರ ಗ್ರಾಮದಲ್ಲಿ 2015 ರಿಂದ 2018ರವರೆಗೆ ಒಟ್ಟು 182 ಶೌಚಾಲಗಳನ್ನು ನಿರ್ಮಿಸಲಾಗಿರುವುದು

ಹಾಗೂ 03 ಫಲಾನುಭವಿಗಳಿಗೆ ಎರಡು ಸಲ ಪ್ರೋತ್ಸಾಹ ಧನ ಪಾವತಿಸಲಾಗಿರುತ್ತದೆಂದು ತಿಳಿಸಿರುತ್ತಾರೆ.

- ಬಂಡಿಹರ್ಲಾಪುರ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಸ್ವಚ್ಛ ಭಾರತ ಮಿಷನ್ ಯೋಜನೆಯಡಿ ಶೌಚಾಲಯ ನಿರ್ಮಾಣದಲ್ಲಿ ಒಟ್ಟು ರೂ.1,53,000/-ಗಳನ್ನು ಸರ್ಕಾರದ ಹಣ ದುರುಪಯೋಗವಾಗಿರುವುದರಿಂದ ಈ ಮೊತ್ತವನ್ನು ಮಾಜಿ ಅಧ್ಯಕ್ಷರು ಹಾಗೂ ಹಾಲಿ ಸದಸ್ಯರಾದ ಆದ ಶ್ರೀಮತಿ ರೇಣುಕ ಹನುಮಂತಪ್ಪ ಕಟಗಿ ಇವರಿಂದ ಹಾಗೂ ಸದರಿ ಪಂಚಾಯಿತಿ ಹಿಂದಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಯಾದ ಶ್ರೀ ಕೃಷ್ಣರೆಡ್ಡಿ ಇವರಿಂದ ಸಮ ಪ್ರಮಾಣದಲ್ಲಿ ವಸೂಲಾತಿ ಮಾಡುವುದು ಸೂಕ್ತವಾಗಿರುತ್ತದೆಂದು ತನಿಖಾ ವರದಿಯಲ್ಲಿ ತಿಳಿಸಿರುವುದು ಕಂಡುಬರುತ್ತದೆ.
- ಸದರಿ ಪ್ರಕರಣದಲ್ಲಿ ಮಾಜಿ ಅಧ್ಯಕ್ಷರು ಹಾಗೂ ಹಾಲಿ ಸದಸ್ಯರಾದ ಶ್ರೀಮತಿ ರೇಣುಕಾ ಗಂಡ ಹನುಮಂತಪ್ಪ ಕಟಗಿ ಇವರ ಈ ಕಾರ್ಯಲಯದಿಂದ ಜಾರಿ ಮಾಡಲಾದ ಕಾರಣ ಕೇಳುವ ನೋಟಿಸ್ ದಿನಾಂಕ:11.07.2019ರ ವಿರುದ್ದ ಮಾನ್ಯ ಉಚ್ಚ ನ್ಯಾಯಾಲಯ ಧಾರವಾಡ ಪೀಠದಲ್ಲಿ ರಿಟ್ ಅರ್ಜಿ ಸಂಖ್ಯೆ:111922/2019ರ ಮೂಲಕ ಪ್ರಕರಣ ದಾಖಲಿಸಿರುತ್ತಾರೆ. ಈ ಪ್ರಕರಣದಲ್ಲಿ ಮಾನ್ಯ ನ್ಯಾಯಾಲಯವು ಸದರಿ ಕಾರಣ ಕೇಳುವ ನೋಟಿಸ್‌ಗೆ ತಡೆಯಾಜ್ಞೆ ನೀಡಿ ದಿನಾಂಕ:18.07.2019ರಂದು ಆದೇಶಿರುವುದು ಕಂಡುಬರುತ್ತದೆ.
- ಸದರಿ ಪ್ರಕರಣದಲ್ಲಿ ಈ ಮೇಲ್ಕಂಡ ಎಲ್ಲಾ ಅಂಶಗಳನ್ನು ಪರಿಗಣನೆಗೆ ತೆಗೆದುಕೊಂಡಾಗ ಬಂಡಿಹರ್ಲಾಪುರ ಗ್ರಾಮ ಪಂಚಾಯಿತಿಯಲ್ಲಿ ಶ್ರೀಮತಿ ರೇಣುಕ ಗಂಡ ಹನುಮಂತಪ್ಪ ಕಟಗಿ, ಮಾಜಿ ಆಧ್ಯಕ್ಷರು ಹಾಗೂ ಹಾಲಿ ಸದಸ್ಯರು ಇವರ ಅವಧಿಯಲ್ಲಿ ಸ್ವಚ್ಛ ಭಾರತ ಮಿಷನ್ ಯೋಜನೆಯಡಿ ಶೌಚಾಲಯಯ ನಿರ್ಮಾಣದಲ್ಲಿ ಅಪೂರ್ಣಗೊಂಡಿರುವ 10 ಶೌಚಾಲಯಗಳನ್ನು ಪೂರ್ಣಗೊಳಿಸಿರುವುದರಿಂದ ಹಾಗೂ ಮೂರು(03) ಫಲಾನುಭವಿಗಳಿಗೆ ಎರಡು ಸಲ ಪಾವತಿಸಲಾದ ಪ್ರೋತ್ಸಾಹ ಧನವನ್ನು ಸಂಬಂಧಪಟ್ಟ ಫಲಾನುಭವಿಗಳು ಡಿ.ಡಿ ಮೂಲಕ ಮರಳಿ ಸರ್ಕಾರಕ್ಕೆ ಭರಣ ಮಾಡಿರುವುದರಿಂದ ಮೇಲ್ಮನವಿ ಪ್ರಾಧಕಾರಗಳು ಹಾಗೂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಜಿಲ್ಲಾ ಪಂಚಾಯಿತಿ ಕೊಪ್ಪಳ ಇವರು ಸದರಿ ಪ್ರಕರಣದ ವಿಚಾರಣೆಯನ್ನು ಜರುಗಿಸಿ ಪ್ರಕರಣವನ್ನು ಮುಕ್ತಾಯಗೊಳಿಸಿ ದಿನಾಂಕ:12.09.2018ರಂದು ಅದೇಶಿರುವುದರಿಂದ ಶ್ರೀಮತಿ ರೇಣುಕ ಗಂಡ ಹನುಮಂತಪ್ಪ ಕಟಗಿ, ಮಾಜಿ ಆಧ್ಯಕ್ಷರು ಹಾಗೂ ಹಾಲಿ ಸದಸ್ಯರು ಸಂಬಂಧಪಟ್ಟ ದಾಖಲಾತಿಗಳೊಂದಿಗೆ ಸಲ್ಲಿಸಿದ ಲಿಖಿತ ಹೇಳಿಕೆಯನ್ನು ಒಪ್ಪಲಾಗಿರುವ ಕಾರಣ ಸದರಿ ಮಾಜಿ ಅಧ್ಯಕ್ಷರು ಹಾಗೂ ಹಾಲಿ ಸದಸ್ಯರ ಮೇಲಿನ ಮಾಡಲಾದ ಆರೋಪವು ಕೈ ಬಿಟ್ಟು ಪ್ರಕರಣವನ್ನು ಮುಕ್ತಾಯಗೊಳಿಸಬಹುದು ಎಂಬ ಅಭಿಪ್ರಾಯದ ವರದಿಯನ್ನು ನೀಡಿರುತ್ತಾರೆ.

ಮೇಲ್ಕಂಡ ಅಂಶಗಳು, ಕಡತದ ಸಂಗತಿಗಳು, ದಾಖಲಾತಿಗಳು, ವಿಚಾರಣಾಧಿಕಾರಿಗಳು ಸಲ್ಲಿಸಿರುವ ವಿಚಾರಣಾ ವರದಿಯಲ್ಲಿನ ಅಂಶಗಳು ಹಾಗೂ ಸದರಿ ಗ್ರಾಮ ಪಂಚಾಯಿತಿಯ ಮಾಜಿ ಅಧ್ಯಕ್ಷರಾದ ಹಾಗೂ ಹಾಲಿ ಸದಸ್ಯರು ಸಲ್ಲಿಸಿರುವ ಲಿಖಿತ ಹೇಳಿಕೆಗಳನ್ನು ಪರಿಶೀಲಿಸಿದಾಗ ಶ್ರೀಮತಿ ರೇಣುಕ ಗಂಡ ಹನುಮಂತಪ್ಪ ಕಟಗಿ ಇವರ ಮೇಲಿನ ಆರೋಪಗಳು ಕೈ ಬಿಟ್ಟು ಪ್ರಕರಣವನ್ನು ಮುಕ್ತಾಯಗೊಳಿಸಲು ಸರ್ಕಾರವು ನಿರ್ಣಯಿಸಿದೆ.

ಅದರಂತೆ ಕೆಳಕಂಡ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/681/ಗ್ರಾಪಂಅ/2019, ಬೆಂಗಳೂರು, ದಿನಾಂಕ:30-12-2019.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ ಲಭ್ಯವಿರುವ ಎಲ್ಲಾ ದಾಖಲಾತಿಗಳನ್ನು ಪರಿಶೀಲಿಸಲಾಗಿ, ಕೊಪ್ಪಳ ಜಿಲ್ಲೆ, ಕೊಪ್ಪಳ ತಾಲ್ಲೂಕಿನ ಬಂಡಿಹರ್ಲಾಪುರ ಗ್ರಾಮ ಪಂಚಾಯಿತಿಯ ಮಾಜಿ ಅಧ್ಯಕ್ಷರಾದ ಹಾಗೂ ಹಾಲಿ ಸದಸ್ಯರಾದ ಶ್ರೀಮತಿ ರೇಣುಕ ಗಂಡ ಹನುಮಂತಪ್ಪ ಕಟಗಿ ಇವರ ಮೇಲೆ ಮಾಡಲಾದ ಆರೋಪಗಳನ್ನು ವಿಚಾರಣಾ ವರದಿಯನ್ವಯ ಕೈ ಬಿಟ್ಟು ಪ್ರಕರಣವನ್ನು ಮುಕ್ತಾಯಗೊಳಿಸಿ ಸರ್ಕಾರವು ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ರಮೇಶ್ ಡಿ.ಓ) 31/12/19
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ(ಪ್ರ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಗೆ:**

1. ಕಾರ್ಯದರ್ಶಿ, ರಾಜ್ಯ ಚುನಾವಣಾ ಆಯೋಗ, ಕನ್ನಿಂಗ್ ಹ್ಯಾಂ ರಸ್ತೆ, ಬೆಂಗಳೂರು.
2. ಮುಖ್ಯ ಕಾರ್ಯನಿರ್ವಾಹಕಾಧಿಕಾರಿ, ಜಿಲ್ಲಾ ಪಂಚಾಯಿತಿ, ಕೊಪ್ಪಳ ಜಿಲ್ಲೆ.
3. ಕಾರ್ಯನಿರ್ವಾಹಕ ಅಧಿಕಾರಿ, ಕೊಪ್ಪಳ ತಾಲ್ಲೂಕು ಪಂಚಾಯಿತಿ, ಬಳ್ಳಾರಿ ಜಿಲ್ಲೆ.
4. ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಬಂಡಿಹರ್ಲಾಪುರ ಗ್ರಾಮ ಪಂಚಾಯಿತಿ, ಕೊಪ್ಪಳ ತಾಲ್ಲೂಕು, ಕೊಪ್ಪಳ ಜಿಲ್ಲೆ.
5. ಶ್ರೀಮತಿ ರೇಣುಕ ಗಂಡ ಹನುಮಂತಪ್ಪ ಕಟಗಿ, ಮಾಜಿ ಅಧ್ಯಕ್ಷರು ಹಾಗೂ ಹಾಲಿ ಸದಸ್ಯರು, ಬಂಡಿಹರ್ಲಾಪುರ ಗ್ರಾಮ ಪಂಚಾಯಿತಿ, ಕೊಪ್ಪಳ ತಾಲ್ಲೂಕು, ಕೊಪ್ಪಳ ಜಿಲ್ಲೆ
6. ಗಣಕ ಕೋಶ-ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
7. ಕಛೇರಿ ಪ್ರತಿ/ಹೆಚ್ಚುವರಿ ಪ್ರತಿ.

**ಪ್ರತಿಯನ್ನು ಮಾಹಿತಿಗಾಗಿ:**

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ಆಪ್ತ ಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ನಿರ್ದೇಶಕರು(ಪಂ.ರಾಜ್-1) ಗ್ರಾ.ಅ ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಸಹಾಯಕರು.

****